# ಅತೃಪ್ತರು ಸೇರಿ 20 ಶಾಸಕರು ಗೈರು

## ರಾಮಲಿಂಗಾರೆಡ್ಡಿ ಅವರು ನಿರೀಕ್ಷೆಯಂತೆ ಹಾಜರು। ಬಿಎಸ್ಪಿಯ ಮಹೇಶ್ ಕಲಾಪದಿಂದ ದೂರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಸರ್ಕಾರದ ಅಳಿವು ಉಳಿವಿನ ಕುರಿತು ವಿಧಾನಸಭೆಯಲ್ಲಿ ಗುರುವಾರ ನಡೆದ ವಿಶ್ವಾಸಮತ ಯಾಚನೆ ಕಲಾಪಕ್ಕೆ ರಾಜೀನಾಮೆ ನೀಡಿರುವ 15 ಅತೃಪ್ತ ಶಾಸಕರು ಸೇರಿ ಮೈತ್ರಿ ಕೂಟದ 17 ಶಾಸಕರು, ಇಬ್ಬರು ಪಕ್ಷೇತರರು ಮತ್ತು ಒಬ್ಬ ಬಿಎಸ್ಪಿ ಶಾಸಕ ಸೇರಿ ಒಟ್ಟು 20 ಶಾಸಕರು ಗೈರಾಗಿದ್ದರು. ಆದರೆ, ರಾಜೀನಾಮೆ ವಾಪಸ್ ಪಡೆದಿದ್ದ ಕಾಂಗ್ರೆಸ್ ಶಾಸಕ ರಾಮಲಿಂಗಾರೆಡ್ಡಿ ನಿರೀಕ್ಷೆಯಂತೆ ಸದನದಲ್ಲಿ ಹಾಜರಿದ್ದರು.



ಗುರುವಾರ ವಿಶ್ವಾಸಮತ ಕಲಾಪಕ್ಕೆ ಹಾಜರಾದ ಬೆಂಗಳೂರಿನ ಬಿಟಿಎಂ ಲೇಔಟ್ ಕಾಂಗ್ರೆಸ್ ಶಾಸಕ ರಾಮಲಿಂಗಾರೆಡ್ಡಿ

ರಾಜೀನಾಮೆ ನೀಡಿರುವ ಕಾಂಗ್ರೆಸ್‌ನ ಗೋಕಾಕ್ ಕ್ಷೇತ್ರದ ಶಾಸಕ ರಮೇಶ್ ಜಾರಕಿಹೊಳಿ, ವಿಜಯನಗರ ಶಾಸಕ ಆನಂದ ಸಿಂಗ್, ಅಥಣಿ ಶಾಸಕ ಮಹೇಶ್ ಕುಮಟಳ್ಳಿ, ಮಸ್ಕಿ ಶಾಸಕ ಪ್ರತಾಪ್ ಗೌಡ ಪಾಟೀಲ್, ಹಿರೇಕೆರೂರು ಶಾಸಕ ಬಿ.ಸಿ. ಪಾಟೀಲ್, ಯಲ್ಲಾಪುರ ಶಾಸಕ ಶಿವರಾಂ ಹೆಬ್ಬಾರ್, ಕೆ.ಆರ್. ಪುರ ಶಾಸಕ ಬೈರತಿ ಬಸವರಾಜು, ಯಶವಂತಪುರ ಶಾಸಕ ಎಸ್.ಟಿ. ಸೋಮಶೇಖರ್, ರಾಜರಾಜೇಶ್ವರಿ ನಗರ ಶಾಸಕ ಮುನಿರತ್ನ, ಹೊಸಕೋಟೆ ಶಾಸಕ ಎಂ.ಟಿ.ಬಿ. ನಾಗರಾಜ್ ಅವರು ಸದನಕ್ಕೆ ಹಾಜರಾಗಿರಲಿಲ್ಲ. ಇವರ ಜೊತೆಗೆ ಚಿಕ್ಕಬಳ್ಳಾಪುರದ ಅತೃಪ್ತ ಶಾಸಕ ಡಾ.ಕೆ.ಸುಧಾಕರ್, ಬೆಂಗಳೂರಿನಲ್ಲೇ ಇರುವ ಶಿವಾಜಿನಗರ ಶಾಸಕ ಆರ್. ರೋಷನ್ ಬೇಗ್ ಕೂಡ ನಿರೀಕ್ಷೆಯಂತೆ ಸದನಕ್ಕೆ ಗೈರು ಹಾಜರಾಗಿದ್ದರು. ಇವರ ಜೊತೆಗೆ, ಮಂಗಳವಾರ ಸಂಜೆವರೆಗೂ ಕಾಂಗ್ರೆಸ್ ಶಾಸಕರ ಜೊತೆ ಖಾಸಗಿ ರೆಸಾರ್ಟ್‌ನಲ್ಲಿದ್ದು ರಾತ್ರಿ ರೆಸಾರ್ಟ್‌ನಿಂದ ನಾಪತ್ತೆಯಾಗಿದ್ದ ಕಾಗವಾಡ ಶಾಸಕ ಶ್ರೀಮಂತ ಪಾಟೀಲ್ ಕೂಡ ಸದನಕ್ಕೆ ಗೈರಾಗಿದ್ದರು. ಕೆಲ ದಿನಗಳ ಹಿಂದಷ್ಟೇ ಹೃದಯಾಘಾತದಿಂದ ನಗರದ ಆಸ್ಟರ್ ಸಿಎಂಐ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಬಳ್ಳಾರಿ ಶಾಸಕ ನಾಗೇಂದ್ರ ಕೂಡ ಸದನಕ್ಕೆ ಹಾಜರಾಗಲಿಲ್ಲ. ಜೆಡಿಎಸ್‌ನ ಮೂವರು ಅತೃಪ್ತ ಶಾಸಕರು ನಿರೀಕ್ಷೆಯಂತೆ ಸದನಕ್ಕೆ ಗೈರು ಹಾಜರಾದರು. ಮೈತ್ರಿ ಸರ್ಕಾರಕ್ಕೆ ಬೆಂಬಲ ವಾಪಸ್ ಪಡೆದಿರುವ ಪಕ್ಷೇತರರಾದ ಮುಳಬಾಗಿಲು ಶಾಸಕ ಎಚ್.ನಾಗೇಶ್ ಹಾಗೂ ಕಾಂಗ್ರೆಸ್ ಸಹ ಸದಸ್ಯ ರಾಣೆಬೆನ್ನೂರು ಶಾಸಕ ಆರ್.ಶಂಕರ್ ಅವರೂ ಕಲಾಪದಿಂದ ದೂರವುಳಿದರು. ಮೈತ್ರಿ ಸರ್ಕಾರ ಬೆಂಬಲಿಸಿದ್ದ ಬಿಎಸ್ಪಿ ಶಾಸಕ ಎನ್. ಮಹೇಶ್ ಕೂಡ ಕಲಾಪಕ್ಕೆ ಹಾಜರಾಗಲಿಲ್ಲ.